**ದಿನಾಂಕಃ 22-08-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.**

**ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಪಾಟೀ ಸವಾಲುಃ 5 ನೇ ಎದುರುದಾರರ ಪರ ಶ್ರೀ. ವಿ ಎಸ್ ಎ ವಕೀಲರಿಂದಃ**

1. ನಾನು ಕೆ ಎ 17 ಹೆಚ್ ಬಿ 2700 ನೇದ್ದರ ಮೋಟಾರ್ ಸೈಕಲ್ ನಲ್ಲಿ ಹಿಂಬದಿ ಸವಾರನಾಗಿ ಹೋಗುತ್ತಿದ್ದೆ. ಎದುರಿನಿಂದ ಬಂದ ಮೋಟಾರ್ ಸೈಕಲ್ ನಲ್ಲಿ ಇಬ್ಬರು ಇದ್ದರು. ನಮ್ಮ ಮೋಟಾರ್ ಸೈಕಲ್ ನಲ್ಲಿ ನಾವು ಇಬ್ಬರೆ ಇದ್ದೆವು. ನಾನು ಹೋಗುತ್ತಿದ್ದ ಮೋಟಾರ್ ಸೈಕಲ್ ನ್ನು ಆಕಾಶ ಚಲಾಯಿಸುತ್ತಿದ್ದನು. ಆಕಾಶ ನಿಗೆ 22 ವರ್ಷ ವಯಸ್ಸಾಗಿರುತ್ತದೆ. ಆಕಾಶ್ ಮೋಟಾರ್ ಸೈಕಲ್ ನ್ನು ವೇಗವಾಗಿ ಚಲಾಯಿಸಿ, ಎದುರಿನಿಂದ ಬರುತ್ತಿದ್ದ ಮೋಟಾರ್ ಸೈಕಲ್ ಗೆ ಡಿಕ್ಕಿ ಪಡಿಸಿರುತ್ತಾನೆ ಎಂದರೆ ಸಾಕ್ಷಿ ಆಕಾಶ ಸಹ ಜೋರಾಗಿ ಹೋಗುತ್ತಿದ್ದ, ಎದುರಿನಿಂದ ಬರುತ್ತಿದ್ದ ಮೋಟಾರ್ ಸೈಕಲ್ ಸಹ ಜೋರಾಗಿ ಬರುತ್ತಿತ್ತು ಎಂದು ಹೇಳುತ್ತಾರೆ. ಅಪಘಾತ ಆಕಾಶನ ತಪ್ಪಿನಿಂದಲೇ ಆಗಿದೆ ಎಂದರೆ ಸರಿಯಲ್ಲ. ಎದುರಿನಿಂದ ಬರುತ್ತಿದ್ದ ಮೋಟಾರ್ ಸೈಕಲ್ ಚಾಲಕನ

ತಪ್ಪಿನಿಂದ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ. ಅಪಘಾತ ಎದುರಿನಿಂದ ಬರುತ್ತಿದ್ದ ಮೋಟಾರ್ ಸೈಕಲ್ ಚಾಲಕನ ತಪ್ಪಿನಿಂದ ಆಗಿಲ್ಲದ ಕಾರಣ 5 ನೇ ಎದುರುದಾರರು ಯಾವುದೆ ಪರಿಹಾರ ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.